ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕೆರೆಗಳ ನಿರ್ವಹಣೆಯ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

758 (710) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಆರ್. ಪುರ ವಿಧಾನಸಭಾ ಕ್ಷೇತ್ರದಲ್ಲಿನ ವಾರ್ಡ್-56 ರಲ್ಲಿ ಇರುವ ಬೆನ್ನಿಗಾನಹಳ್ಳಿ ಕೆರೆ ಕಲುಷಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆನ್ನಿಗಾನಹಳ್ಳಿ ಕೆರೆಯನ್ನು ಹತ್ತು ತಿಂಗಳ ಹಿಂದೆ ಅಭಿವೃದ್ಧಿಪಡಿಸಿ ಸರಿಯಾದ ಸಮರ್ಪಕ ನಿರ್ವಹಣೆ ಮಾಡದೆ ಸರ್ಕಾರದ ಹಣವನ್ನು ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೆನ್ನಿಗಾನಹಳ್ಳಿ ಕೆರೆ ಮತ್ತೆ ಅವಸಾನದ ಹಾದಿ ಹಿಡಿದಿದ್ದು, ಸದರಿ ಕೆರೆಯು ಮಳೆ ಬಂದಾಗ ಕೆರೆಯ ದಡದ ಮೇಲಿನ ಮಣ್ಣು ಕೆರೆಗೆ ಸೇರುತ್ತಿದ್ದು, ಕೆರೆಯ ಬದಿಯಲ್ಲಿರುವ ಕಲ್ಲು ಬೆಂಚುಗಳು ಮುರಿದು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸದರಿ ಕೆರೆಯನ್ನು ಸಮರ್ಪಕವಾಗಿ ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿಯನ್ನು ನೀಡುವುದು)